ಆ) ಹಾಗಿದ್ದಲ್ಲಿ, ಈ ಕೊರತೆಯನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಇ) ಎಂದು ಶಾಲಾ ಶಿಕ್ಷಕರುಗಳ ನೇಮಕಾತಿಯನ್ನು ಪ್ರಾರಂಭಿಸಲಾಗುವುದು?

ಶ್ರೀ ವೀರಪ್ಪ ಮೊಯ್ಲಿ (ಶಿಕ್ಷಣ ಮಂತ್ರಿಗಳು):–

ಆ) ಹೌದು.

ಆ) ನೇಮಕಾತಿ ಪ್ರಾಧಿಕಾರವು ಹುದ್ದೆಗಳನ್ನು ಭರ್ತಿ ಮಾಡಲುಮವಾಗಲು ಆರ್ಥಿಕ ಮಿತವ್ಯಯ ಆದೇಶವನ್ನು ಸಡಿಲಿಸಲಾಗಿದೆ. ಆದಾಗ್ಯೂ ಶಿಕ್ಷಕರ ನೇಮಕಾತಿ ವಿಷಯದಲ್ಲಿ ಪ್ರಾದೇಶಿಕ ಸಮಾನತೆಯನ್ನು ತರುವ ದೃಷ್ಟಿಯಿಂದ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಬೇಕೆಂದು ಸರ್ಕಾರಕ್ಕೆ ಮನವಿ ಬಂದ ಕಾರಣ, ನೇಮಕಾತಿ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲಾಗಿದೆ. ಪ್ರಾದೇಶಿಕ ಸಮಾನತೆಯನ್ನು ಒದಗಿಸುವ ಕಾರಣದಿಂದ ವೃಂದ ಮತ್ತು ನೇಮಕಾತಿ ನಿಯಮಕ್ಕೆ ತಿದ್ದುಪಡಿ ತರುವ ಪ್ರಶ್ನೆಯು ಈಗ ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ಶೀಘ್ರದಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿಯನ್ನು ಮಾಡುವ ಕಾರ್ಯವು ಅಂತಿಮಗೊಳ್ಳುವುದೆಂದು ಭಾವಿಸಲಾಗಿದೆ. ಇದು ಆದ ಕೂಡಲೇ ನೇಮಕಾತಿ ಪ್ರಕ್ರಿಯೆಗಳು ಪ್ರಾರಂಭಗೊಳ್ಳುವುವು.

ಕರ್ನಾಟಕ–ಮಹಾರಾಷ್ಟ್ರ ಗಡಿ ಸಮಸ್ಯೆಯ ಅಂತಿಮ ನಿರ್ಧಾರದ ಬಗ್ಗೆ

373. ಶ್ರೀ ಮಲ್ಲಾರಿಗೌಡ ಎಸ್. ಪಾಟೀಲ್ (ಸಂಕೇಶ್ವರ):– ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಹಾಜನ ಆಯೋಗದ ವರದಿಯನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರವನ್ನು ಒತ್ತಾಯ ಮಾಡಲು ಸರ್ಕಾರದ ಕಾರ್ಯಕ್ರಮಗಳೇನು?

ಆ) ಮಹಾಜನ ಆಯೋಗದ ತೀರ್ಪನ್ನು ಕರ್ನಾಟಕ ಸರ್ಕಾರ ಒಪ್ಪಿದರೂ ಮಹಾರಾಷ್ಟ್ರ ಸರ್ಕಾರ ಒಪ್ಪದೇ ಇರುವುದಕ್ಕೆ ಕರ್ನಾಟಕ ಸರ್ಕಾರದ ಕಾರ್ಯಕ್ರಮ ಏನು?

ಶ್ರೀ ಎಸ್. ಬಂಗಾರಪ್ಪ (ಮುಖ್ಯ ಮಂತ್ರಿಗಳು):–

ಅ) 1967ರ ಆಗಸ್ಟ್‌ನಲ್ಲಿ ಮಹಾಜನ ಆಯೋಗವು ತನ್ನ ವರದಿಯನ್ನು ಭಾರತ ಸರ್ಕಾರಕ್ಕೆ ಸಲ್ಲಿಸಿದಾಗಿನಿಂದ ಕರ್ನಾಟಕ ಸರ್ಕಾರವು ಅದರ ಶಿಫಾರಸ್ಸುಗಳನ್ನು ಕಾರ್ಯಗತಗೊಳಿಸುವಂತೆ ಭಾರತ ಸರ್ಕಾರವನ್ನು ನಿರಂತರವಾಗಿ ಒತ್ತಾಯಿಸುತ್ತಾ ಬಂದಿವೆ. ಕರ್ನಾಟಕ ವಿಧಾನಮಂಡಲವು ಮಹಾಜನ ವರದಿಯನ್ನು ಸಂಪೂರ್ಣವಾಗಿ ಕಾರ್ಯಗತಗೊಳಿಸುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಿ ಹಲವಾರು ನಿರ್ಣಯಗಳನ್ನು ಅಂಗೀಕರಿಸಿದೆ. ದಿನಾಂಕ 4.12.1986ರಲ್ಲಿ ಕರ್ನಾಟಕ ಸಂಸತ್ ಸದಸ್ಯರ ನಿಯೋಗವು ಹಾಗೂ ದಿನಾಂಕ 11.7.1988ರಲ್ಲಿ ಕರ್ನಾಟಕ ವಿಧಾನ ಮಂಡಲದ ಸರ್ವ ಪಕ್ಷೀಯ ನಿಯೋಗವು ಅಂದಿನ ಮುಖ್ಯ ಮಂತ್ರಿಗಳ ನೇತೃತ್ವದಲ್ಲಿ ಕೇಂದ್ರ ಗೃಹ ಸಚಿವರನ್ನು ಭೇಟಿ ಮಾಡಿ ವರದಿಯನ್ನು ಆದಷ್ಟು ಜಾಗ್ರತೆಯಾಗಿ ಅನುಷ್ಠಾನಗೊಳಿಸುವಂತೆ ಮನವಿ ಸಲ್ಲಿಸಿದೆ. ವರದಿಯನ್ನು ಸಂಪೂರ್ಣ ಕಾರ್ಯಗತಗೊಳಿಸುವಂತೆ ಕೇಂದ್ರ ಸರ್ಕಾರಕ್ಕೆ ಹಲವಾರು ಪತ್ರಗಳನ್ನು ಬರೆಯಲಾಗಿದೆ. ಇತ್ತೀಚೆಗಷ್ಟೇ ದಿನಾಂಕ 9.4.1990ರಂದು ಅಂದಿನ ಮುಖ್ಯ ಮಂತ್ರಿಗಳು ಎಲ್ಲ ವಿಷಯವನ್ನು ವಿವರಿಸಿ, ಮಹಾಜನ ವರದಿಯನ್ನು ಆದಷ್ಟು ಜಾಗ್ರತೆಯಾಗಿ ಕಾರ್ಯಗತಗೊಳಿಸುವಂತೆ ಅಂದಿನ ಕೇಂದ್ರ ಗೃಹ ಮಂತ್ರಿಯವರಿಗೆ ಪತ್ರ ಬರೆದಿರುವರು.

ಆ) ಮಹಾಜನ ಆಯೋಗದ ರಚನೆಯ ಸಮಯದಲ್ಲಿ ಮಹಾರಾಷ್ಟ್ರ ಸರ್ಕಾರ ಹಾಗೂ ಅವರ ಮುಖಂಡರು ಮಾಡಿಕೊಂಡಿದ್ದ ವಚನಬದ್ಧತೆಯನ್ನು ವಿಸ್ತಾರವಾಗಿ ನಿರೂಪಿಸಿ ಮಹಾಜನ ಆಯೋಗದ ವರದಿಯನ್ನು ಸಂಪೂರ್ಣವಾಗಿ ಒಪ್ಪಿಕೊಳ್ಳುವಂತೆ ಕೇಂದ್ರ ಸರ್ಕಾರವನ್ನು ಕರ್ನಾಟಕ ಸರ್ಕಾರವು ಸಮರ್ಥಿಸುತ್ತಾ ಬಂದಿದೆ ಹಾಗೂ ಕೇಂದ್ರ ಸರ್ಕಾರವು ವರದಿಯನ್ನು ಸಂಪೂರ್ಣವಾಗಿ ಒಪ್ಪಿಕೊಳ್ಳುವಂತೆ ಮಾಡಲು ಅಗತ್ಯವಾದ ಎಲ್ಲ ಕ್ರಮಗಳನ್ನು ಕೈಗೊಳ್ಳುವುದು.